**9) ಲಿಖಿತ ಪರೀಕ್ಷೆಯಲ್ಲಿ 1:5ರ ಅನುಪಾತದಡಿ ಅರ್ಹಗೊಂಡ ಅಭ್ಯರ್ಥಿಗಳಿಗೆ ದೇಹದಾರ್ಢ್ಯತೆ ಪರೀಕ್ಷೆ (Physical Standard Test) ಮತ್ತು ಸಹಿಷ್ಣುತೆ ಪರೀಕ್ಷೆ (Endurance Test) ಗಳನ್ನು ನಡೆಸಲಾಗುವುದು:**

**ಪರೀಕ್ಷೆಗಳ ದಿನಾಂಕವನ್ನು ಪೊಲೀಸ್ ಇಲಾಖೆಯ ವೆಬ್‌ಸೈಟ್ http://recruitment.ksp.gov.in ನಲ್ಲಿ ಪ್ರಕಟಿಸಲಾಗುವುದು. ದೇಹದಾರ್ಢ್ಯತೆ ಮತ್ತು ಸಹಿಷ್ಣುತೆ ಪರೀಕ್ಷೆಯ ದಿನಾಂಕ, ಸಮಯ ಮತ್ತು ಸ್ಥಳವನ್ನು ಹೊಂದಿರುವ ಪ್ರವೇಶ/ಕರೆ ಪತ್ರಗಳನ್ನು ಪೊಲೀಸ್ ಇಲಾಖೆಯ ಅಂತರ್ಜಾಲದಿಂದ ಅಭ್ಯರ್ಥಿಗಳು ಕಡ್ಡಾಯವಾಗಿ ಡೌನ್ ಲೋಡ್ ಮಾಡಿಕೊಳ್ಳಬೇಕು. ಅಭ್ಯರ್ಥಿಗಳಿಗೆ ಪ್ರವೇಶ ಪತ್ರಗಳನ್ನು ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ. ಪ್ರವೇಶ ಪತ್ರವಿಲ್ಲದೇ ಪಿ.ಎಸ್.ಟಿ. ಮತ್ತು ಇ.ಟಿ. ಪರೀಕ್ಷೆಗಳಿಗೆ ಅನುವು ಮಾಡಲಾಗುವುದಿಲ್ಲ. ಈ ಸಂಬಂಧ ಅಭ್ಯರ್ಥಿಗಳು ಮುಖ್ಯವಾಗಿ ಈ ಕಛೇರಿಯ ಅಧಿಕೃತ ವೆಬ್‌ಸೈಟ್ http://recruitment.ksp.gov.in ನ್ನು ಮೇಲಿಂದ ಮೇಲೆ ಗಮನಿಸುತ್ತಿರುವುದು ಸೂಕ್ತ.**

a) ಅಭ್ಯರ್ಥಿಗಳಿಗೆ ಸಹಿಷ್ಣುತೆ ಮತ್ತು ದೇಹದಾರ್ಢ್ಯತೆ ಪರೀಕ್ಷೆಗಳನ್ನು ಸಂಬಂಧಪಟ್ಟ ಪೊಲೀಸ್ ಅಧೀಕ್ಷಕರ / ಪೊಲೀಸ್ ಆಯುಕ್ತರ ಕಛೇರಿಯು ನಿಗದಿಪಡಿಸಿದ ಸ್ಥಳದಲ್ಲಿ ನಡೆಸಲಾಗುವುದು. ಆಯ್ಕೆ ಸಮಿತಿಯು ಯಾವುದೇ ಪರೀಕ್ಷಾ ಕೇಂದ್ರವನ್ನು ರದ್ದುಪಡಿಸುವ ಅಥವಾ ಹೊಸದಾಗಿ ಸೇರಿಸುವ ಹಕ್ಕನ್ನು ಕಾಯ್ದಿರಿಸಿಕೊಂಡಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಇಲಾಖೆಯ ವೈಬ್‌ಸೈಟ್‌ನ್ನು ದಿನ ನಿತ್ಯ ನೋಡಲು ತಿಳಿಸಲಾಗಿದೆ.

b) ದೈಹಿಕ ಪರೀಕ್ಷೆಯು ನಡೆಯುವ ವೇಳೆ ಮತ್ತು ಸ್ಥಳವನ್ನು ಸಂಬಂಧಪಟ್ಟ ದೈಹಿಕ ಪರೀಕ್ಷೆಯ ಕೇಂದ್ರಗಳ ಸೂಚನಾ ಫಲಕದಲ್ಲಿಯೂ ಸಹ ಪ್ರಕಟಿಸಲಾಗುವುದು. ಕರೆಪತ್ರವನ್ನು ಪಡೆಯದೆ ಪರೀಕ್ಷೆಗೆ ಹಾಜರಾದಲ್ಲಿ ಅಂತಹವರಿಗೆ ದೈಹಿಕ ಪರೀಕ್ಷೆಗೆ ಅವಕಾಶ ನೀಡಲಾಗುವುದಿಲ್ಲ.
ದೈಹಿಕ ಪರೀಕ್ಷೆಗೆ ಬರುವಾಗ ಕರೆಪತ್ರದ ಜೊತೆಗೆ ಈ ಕೆಳಕಂಡ ಯಾವುದಾದರೊಂದು ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

i) ಪಾಸ್‌ಪೋರ್ಟ್ (Passport)
ii) ಚಾಲನಾ ಪರವಾನಗಿ ಪತ್ರ (Driving License)
iii) ಪ್ಯಾನ್ ಕಾರ್ಡ್ (PAN Card)
iv) ರಾಜ್ಯ ಸರ್ಕಾರ/ ಕೇಂದ್ರ ಸರ್ಕಾರ / ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗೀ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ (Service ID Card)
v) ಸಾರ್ವಜನಿಕ ಬ್ಯಾಂಕುಗಳು / ಅಂಚೆ ಕಛೇರಿಗಳು ವಿತರಿಸಿರುವ ಭಾವಚಿತ್ರವಿರುವ ಪಾಸ್ ಪುಸ್ತಕ (Bank Pass Book with Photograph)
vi) ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆಪತ್ರ ಅಥವಾ ಪಟ್ಟಾ ಪುಸ್ತಕ (Pattas and registered deeds with Photograph)
vii) ಭಾವಚಿತ್ರ ಸಮೇತ ಸಂಬಂಧಪಟ್ಟ ಪ್ರಾಧಿಕಾರಿಯವರು ವಿತರಿಸಿರುವ ಜಾತಿ ಪ್ರಮಾಣ ಪತ್ರ (Caste Certificate with Photo)
viii) ಮಾಜಿ ಸೈನಿಕ ಅಭ್ಯರ್ಥಿಗಳಿಗೆ ವಿತರಿಸಿರುವ ಪಿಂಚಣಿ ಪುಸ್ತಕ / ಪಿಂಚಣಿ ಮಂಜೂರಾತಿ ಆಗಿರುವ ಆದೇಶ (Ex-servicemen’s pension book/pension payment order)
ix) ಎನ್.ಆರ್.ಇ.ಜಿ.ಎಸ್.ಯಿಂದ ನೀಡಿದ ಭಾವಚಿತ್ರವಿರುವ ಉದ್ಯೋಗ ಚೀಟಿ. (Job cards with Photograph)
x) ಎಲೆಕ್ಟೋರಲ್ ಪೋಟೋ ಗುರುತಿನ ಚೀಟಿ (EPIC).

ಭಾರತೀಯ ಗುರುತು ಪ್ರಾಧಿಕಾರದಿಂದ ನೀಡಲಾಗಿರುವ ಆಧಾರ್ ಕಾರ್ಡ್.(AADHAR CARD).

c) ಕರೆಪತ್ರದ ಜೊತೆಗೆ ಆನ್‌ಲೈನ್ ಮುಖಾಂತರ ಸಲ್ಲಿಸಿದ ಅರ್ಜಿಯ ಜೆರಾಕ್ಸ್ ಪ್ರತಿಯನ್ನು ಸಹ ತರತಕ್ಕದ್ದು, ತಪ್ಪಿದ್ದಲ್ಲಿ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡಲಾಗುವುದಿಲ್ಲ. ನಿಗದಿತ ದಿನಾಂಕ ಹಾಗೂ ಸಮಯದಲ್ಲಿ ಹಾಜರಾಗದಿದ್ದರೆ ಅಂತಹವರನ್ನು ಗೈರುಹಾಜರೆಂದು ಪರಿಗಣಿಸಲಾಗುವುದು ಹಾಗೂ ಬದಲಿ ದಿನಾಂಕವನ್ನು ನೀಡಲಾಗುವುದಿಲ್ಲ.